# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s BOSCH Ltd., ರವರಿಗೆ ಬೆಂಗಳೂರು ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ದೊಡ್ಡಸನ್ನೆ ಮತ್ತು ಅರಸಿನಕುಂಟೆ ಗ್ರಾಮದಲ್ಲಿ (ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿಯಮಿತ) 2.5 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕ ಸ್ಥಾಪನೆಗೆ ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 450.

* * *

**ಪ್ರಸ್ತಾವನೆ :-**

M/s BOSCH Ltd., ರವರಿಗೆ ಬೆಂಗಳೂರು ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ದೊಡ್ಡಸನ್ನೆ ಮತ್ತು ಅರಸಿನಕುಂಟೆ ಗ್ರಾಮದಲ್ಲಿ (ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿಯಮಿತ) 2.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕವನ್ನು Independant Power Producer (IPP) Category ಯಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಏಕ ಕಡತ ಪದ್ಧತಿಯಡಿ ಮೇಲೆ ಓದಲಾದ ಕಡತದಲ್ಲಿ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ವಿವರ | : | ಜಿಲ್ಲೆ : ಬೆಂಗಳೂರು<br>ತಾಲ್ಲೂಕ : ದೇವನಹಳ್ಳಿ<br>ಗ್ರಾಮ : ದೊಡ್ಡಸನ್ನೆ ಮತ್ತು ಅರಸಿನಕುಂಟೆ (ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿಯಮಿತ) |
| ಯೋಜನಾ ಪ್ರದೇಶದ ಜಮೀನಿನ ವಿವರ | : | ಖಾಸಗಿ |
| ಯೋಜನಾ ಪ್ರದೇಶದ ಸ್ಥಳದ ವಿವರ | : | ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿಯಮಿತ (KIAL) |
| ಸಮೀಪದ ಸಬ್‌ಸ್ಟೇಷನ್ ವಿವರ | : | KIAL Internal Sub-Station |
| ಯೋಜನಾ ಪ್ರದೇಶದ ಜಿ.ಪಿ.ಎಸ್. ವಿವರ | : | Latitude (N) 13°27′<br>Longitude(E) 77°07′ |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | ಮೂರನೇ ವ್ಯಕ್ತಿಗೆ ಮಾರಾಟ ಮಾಡಲು |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ | : | ಅರ್ಜಿ ನೋಂದಣಿ ಶುಲ್ಕ ಪಾವತಿಸಿದೆ |

M/s BOSCH Ltd., ರವರಿಗೆ ಬೆಂಗಳೂರು ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ದೊಡ್ಡಸನ್ನೆ ಮತ್ತು ಅರಸಿನಕುಂಟೆ ಗ್ರಾಮದಲ್ಲಿ (ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿಯಮಿತ) 2.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು Independant Power Producer (IPP) Category ಯಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಗೆ ನಿರಾಕ್ಷೇಪಣೆಯನ್ನು ನೀಡುವ ಕುರಿತು ಮೇಲೆ ಓದಲಾದ ಕಡತದ ಮೂಲಕ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಶಿಫಾರಸ್ಸಿನೊಂದಿಗೆ ಸಲ್ಲಿಸಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 384 ಎನ್‌ಸಿಇ 2016**

**ಬೆಂಗಳೂರು, ದಿನಾಂಕ: 04.10.2017.**

M/s BOSCH Ltd., ರವರಿಗೆ ಬೆಂಗಳೂರು ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ದೊಡ್ಡಸನ್ನೆ ಮತ್ತು ಅರಸಿನಕುಂಟೆ ಗ್ರಾಮದಲ್ಲಿ (ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿಯಮಿತ) 2.5 ಮೆ.ವ್ಯಾ.

...2)

ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕವನ್ನು Independant Power Producer (IPP) Category ಯಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿದೆ.

1. M/s BOSCH Ltd., ರವರು ಸದರಿ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಪರವಾನಿಗೆ / ಅನುಮತಿ / ಅನುಮೋದನೆಗಳನ್ನು ಸಂಬಂಧಿಸಿದ ಇಲಾಖೆಗಳ / ಸಂಸ್ಥೆಗಳ / ಸಕ್ಷಮ ಪ್ರಾಧಿಕಾರಗಳಿಂದ ಪಡೆದುಕೊಳ್ಳತಕ್ಕದ್ದು;
2. M/s BOSCH Ltd., ರವರು ಸೌರ ನೀತಿ 2014-21 ರನ್ವಯ ಈ ಬಾಬ್ತು ಅನ್ವಯಿಸುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;
3. ಪ್ರಸ್ತಾಪಿತ ಸೋಲಾರ್ ಘಟಕದಿಂದ ಉತ್ಪತ್ತಿಯಾಗುವ ವಿದ್ಯುತ್ತನ್ನು Independant Power Producer (IPP) Category ಯಡಿ ಸ್ಥಾಪಿಸಿ, ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಹಾಗೂ ಈ ಸಂಬಂಧ ಅಗತ್ಯವಿರುವ ವಿದ್ಯುತ್ ಜಾಲಕ್ಕೆ ಜೋಡಣೆ ಮಾಡಲು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ವೀಲಿಂಗ್ ಮತ್ತು ಬ್ಯಾಂಕಿಂಗ್ ಒಪ್ಪಂದ ಮಾಡಿಕೊಳ್ಳಲು ಅನುಮತಿಸಿದೆ;
4. M/s BOSCH Ltd., ರವರು ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು;
5. ಯೋಜನಾ ಅಭಿವೃದ್ಧಿದಾರರು ಕೆ.ಆರ್.ಇ.ಡಿ.ಎಲ್ ಸಂಸ್ಥೆಗೆ ಸೌರ ನೀತಿ 2014-21 ರ ಪ್ರಕಾರ ಅನ್ವಯವಾಗುವ ಸಂಸ್ಕರಣಾ ಶುಲ್ಕವನ್ನು (Facilitation fee) ಹಂಚಿಕೆಯ ಆದೇಶದ ದಿನದಿಂದ 15 ದಿನಗಳೊಳಗೆ ಪಾವತಿಸಬೇಕೆಂದು ಹಾಗೂ ನಲವತ್ತೈದು ದಿನಗಳೊಳಗೆ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ, ಈ ಹಂಚಿಕೆಯ ಆದೇಶವು ತಂತಾನೇ ರದ್ದಾಗುವುದು;
6. ಸದರಿ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯ್ಯನ್ನು (Performance Bank Guarantee) ಸರ್ಕಾರಿ ಆದೇಶದ ಷರತ್ತುಗಳನ್ವಯ ಪ್ರಸ್ತಾವಿತ ಯೋಜನೆಯು ಪೂರ್ಣವಾಗಿ ಅನುಷ್ಠಾನಗೊಂಡ ನಂತರ ಸಂಬಂಧಪಟ್ಟ ಅಭಿವೃದ್ಧಿದಾರರಿಗೆ ಹಿಂದಿರುಗಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಅಗತ್ಯ ಕ್ರಮ ವಹಿಸತಕ್ಕದ್ದು;
7. M/s BOSCH Ltd., ರವರು ಸ್ಥಾಪಿಸುತ್ತಿರುವ ಈ ಸೌರ ವಿದ್ಯುತ್ ಘಟಕಕ್ಕೆ ಸರ್ಕಾರದ 2014-21 ರ ಸೋಲಾರ್ ನೀತಿ ಹಾಗೂ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ;
8. ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಆದೇಶ ಹೊರಡಿಸಿದ ದಿನಾಂಕದಿಂದ 18 ತಿಂಗಳೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**

ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.

...3)

2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು–9.

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು–560 001.

4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.

6 ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು.

7 ಉಪ ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ಜಿಲ್ಲೆ, ಬೆಂಗಳೂರು.

8 ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.

9 M/s Bosch Ltd., PB NO-3000, Hosur road, Adugodi, Bangalore-560 030.

10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.